ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಅ/ಬ್ಯಾ.ವಿ/ತಾಂ.ಮ/155/2016-17

ಕಾರ್ಯಪಾಲಕ ಅಭಿಯಂತರವರ ಕಛೇರಿ
ಬ್ಯಾಟರಾಯನಪುರ, ಬೃ.ಬೆಂ.ಮ.ಪಾ.
ಬೆಂಗಳೂರು-92
ದಿನಾಂಕ: 06/02/2017

ತಾಂತ್ರಿಕ ಮಂಜೂರಾತಿ

ವಿಷಯ:- Filling of Pot holes in ward no. 10 (Doddabommasandra), Vidyaranyapura sub division.

ಉಲ್ಲೇಖ:-1) ಆಡಳಿತಾತ್ಮಕ ಮಂಜೂರಾತಿ ಸಂಖ್ಯೆ: ಬೃ.ಬೆಂ.ಮ.ಪಾ./ಅ.ಅ/ಕಾ.ಪಾ.ಅ/161/ 16-17,
ದಿನಾಂಕ: 03/02/17

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ವಿದ್ಯಾರಣ್ಯಪುರ ಉಪವಿಭಾಗ) ರವರು **ಪಿ-1771** ರ ಅಡಿಯಲ್ಲಿ ಪಿಡಬ್ಲೂಡಿ 2015-16ನೇ ಸಾಲಿನ ದರಪಟ್ಟಿಯನ್ವಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಯಲಹಂಕ ವಲಯದಲ್ಲಿ ಪಿ-1771 ರ ಅಡಿಯಲ್ಲಿ ಮೇಲ್ಕಂಡ ಕಾಮಗಾರಿಯನ್ನು ಕೈಗೊಳ್ಳಲು **ರೂ. 20.00** ಲಕ್ಷಗಳಿಗೆ ಕಾಮಗಾರಿ ಸಂಕೇತ ದೊರೆತಿದ್ದು ಪ್ರಸ್ತುತ ರೂ. 10.00 ಲಕ್ಷಗಳ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಸದರಿ ಕಾಮಗಾರಿಯನ್ನು ಮಾನ್ಯ ಆಯುಕ್ತರವರು ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:21-07-2015ರಲ್ಲಿ ರಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 30 ಕ್ರ.ಸಂ 155 ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ಧಗೊಳಿಸುವುದು.
2. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
3. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
4. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
5. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.
6. ಸದರಿ ಕೆಲಸವು ಎಂಬ್ಯಾಕ್ ಮೆಂಟ್/ಕಾಂಕ್ರೀಟ್/ಡಾಂಬರೀಕರಣ-ಬಿಎಂ-ಬಿಸಿ /WMM-WBM ಕಾಮಗಾರಿಗಳಾಗಿದ್ದಲ್ಲಿ, MORT & H ಅನ್ವಯ ಗುಣಮಟ್ಟ ಪರೀಕ್ಷೆ ಹಾಗೂ Core-cut ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶವನ್ನು ಪಡೆದುಕೊಳ್ಳುವುದು.

6/02

ಕಾರ್ಯಪಾಲಕ ಅಭಿಯಂತರರು
ಬ್ಯಾಟರಾಯನಪುರ ವಿಭಾಗ
ಬಿ.ಬಿ.ಎಂ.ಪಿ, ಬೆಂಗಳೂರು-92.

06/02

ಪ್ರತಿಯನ್ನು:

1. ಮಾನ್ಯ ಅಪರ ಆಯುಕ್ತರು, ಬಿ.ಬಿ.ಎಂ.ಪಿ ಯಲಹಂಕ ವಲಯರವರ ಮಾಹಿತಿಗಾಗಿ.
2. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ.
3. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
4. ಮುಖ್ಯ ಲೇಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.